# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 03-09-2021 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು**

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ. ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ.ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀಮತಿ ಸರಸ್ವತಿ, ಸದಸ್ಯರು (ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್)
7. ಶ್ರೀ ವಿನೋದ್, ಸ್ಥಳೀಯರು, ಕಾಚರಕನಹಳ್ಳಿ,

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಸೂಪರ್‌ವೈಸರ್,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
7. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
8. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
9. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,
10. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿನ ನೀರು ಸರಬರಾಜು ಘನತ್ಯಾಜ್ಯ ಸಂಸ್ಕರಣೆ ಹಾಗೂ ವಿಲೇವಾರಿ ಕಾರ್ಯವು ಸಹ ಸಮರ್ಪಕವಾಗಿ ಮಾಡುತ್ತಿದ್ದು, ರಸ್ತೆಗಳ ಗುಡಿಸುವಿಕೆಯಲ್ಲಿ ಇನ್ನಷ್ಟು ಪ್ರಗತಿ ಸಾಧಿಸಬೇಕಾಗಿರುತ್ತದೆ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಚರ್ಚಿಸಿ ವಾರ್ಡ್ ಪ್ರದೇಶದ ಎಲ್ಲಾ ರಸ್ತೆಗಳನ್ನು ಸ್ವಚ್ಛಗೊಳಿಸಲು ಪೌರ ಕಾರ್ಮಿಕರನ್ನು ಹೆಚ್ಚುವರಿಯಾಗಿ ನಿಯೋಜಿಸಿ, ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ನಿರೀಕ್ಷಕರು ಸಭೆಗೆ ತಿಳಿಸಿದರು.



Scanned with CamScanner

2) ಶ್ರೀ ವಿನೋದ್, ಸ್ಥಳೀಯರು, ಕಾಚರಕನಹಳ್ಳಿ ರವರು ಮಾತನಾಡಿ, ಕಮ್ಮನಹಳ್ಳಿ ಪ್ರದೇಶದಲ್ಲಿ ಅಲ್ಲಲ್ಲಿ ವಿದ್ಯುತ್ ಸರಬರಾಜು ತಂತಿಗಳು ನೇತಾಡುತ್ತಿದ್ದು, ಇವುಗಳು ಅಪಾಯಕಾರಿಯಾಗಿರುವುದರಿಂದ ಕೂಡಲೇ ಸಂಬಂಧಪಟ್ಟ ಇಲಾಖೆಯವರು ಕ್ರಮ ವಹಿಸಲು ಹಾಗೂ ಕಾಚರಕನಹಳ್ಳಿ ಪ್ರದೇಶದಲ್ಲಿ ವಿದ್ಯುತ್ ಸರಬರಾಜು ಅನಿರೀಕ್ಷಿತವಾಗಿ ನಿಲುಗಡೆಯಾಗುತ್ತಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ, ಬೆಸ್ಕಾಂ ಅಧಿಕಾರಿಗಳು ವಾರ್ಡ್ ಪ್ರದೇಶದಲ್ಲಿ ವಿದ್ಯುತ್ ಭೂಗತ ಕೇಬಲ್‌ಗಳನ್ನು ಅಳವಡಿಸಲಾಗುತ್ತಿರುವುದರಿಂದ ವಿದ್ಯುತ್ ಸರಬರಾಜನ್ನು ನಿಲುಗಡೆ ಮಾಡಲಾಗುತ್ತಿರುತ್ತದೆ. ಇಂದೂ ಸಹ ವಾರ್ಡ್ ಪ್ರದೇಶದಲ್ಲಿ ವಿದ್ಯುತ್ ಅನ್ನು ನಿಲುಗಡೆ ಮಾಡಲಾಗಿದೆ. ಇದಕ್ಕೆ ಪೂರ್ವಭಾವಿಯಾಗಿ ಮೊದಲೇ ಸಾರ್ವಜನಿಕರಿಗೆ ಮಾಹಿತಿ ನೀಡಲಾಗಿದೆ ಮತ್ತು ಕಮ್ಮನಹಳ್ಳಿಯಲ್ಲಿ ನೇತಾಡುತ್ತಿರುವ ವಿದ್ಯುತ್ ಸರಬರಾಜು ತಂತಿಗಳನ್ನು ಕೂಡಲೇ ಎತ್ತರಕ್ಕೆ ವಿಸ್ತರಿಸಲಾಗುವುದು ಎಂದು ಸಭೆಗೆ ತಿಳಿಸಿದರು.

3) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ಕಮ್ಮನಹಳ್ಳಿ ಮುಖ್ಯರಸ್ತೆ ಹಾಗೂ ನೆಹರು ರಸ್ತೆಯಲ್ಲಿ ಹೆಚ್ಚು ಜನಜಂಗುಳಿ ಇದ್ದು, ಈ ಪ್ರದೇಶದಲ್ಲಿ ಪೊಲೀಸ್ ಸಂಚಾರ ವಿಭಾಗದವರು ಪರಿಶೀಲಿಸಿ, ಅಲ್ಲಲ್ಲಿ ಶಾಶ್ವತವಾಗಿ ನಿಲುಗಡೆ ಮಾಡುವ ಹಾಗೂ ಇತರೆ ವಾಹನಗಳನ್ನು ತೆಗೆದು ರವಾನಿಸಲು ಈ ರಸ್ತೆಗಳನ್ನು ಪರಿಶೀಲಿಸಿ, ಈ ಪ್ರದೇಶವನ್ನು ಟೋಯಿಂಗ್ ಜೋನ್ ಎಂದು ಘೋಷಿಸಲು ಸಭಾ ಗಮನಕ್ಕೆ ತಂದಾಗ ಈ ಬಗ್ಗೆ ಚರ್ಚಿಸಿ, ಸಭೆಯಲ್ಲಿದ್ದ ಸಂಚಾರಿ ವಿಭಾಗದ ಪೊಲೀಸ್ ಅಧಿಕಾರಿಗಳಿಗೆ ಪರಿಶೀಲಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

4) ಶ್ರೀಮತಿ ಸರಸ್ವತಿ, ಸದಸ್ಯರು (ಜಲವಾಯು ವಿಹಾರ ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್) ರವರು ಮಾತನಾಡಿ, ವಾರ್ಡ್ ಪ್ರದೇಶದ ನೆಹರು ರಸ್ತೆಯಲ್ಲಿ ಹಾಗೂ ಬಿಡಿಎ ಬಡಾವಣೆಗಳಲ್ಲಿ ಹಲವು ಮರಗಳು ಹಾಗೂ ಮರಗಳ ಕೊಂಬೆಗಳು ಒಣಗಿದ್ದು, ಅವು ಸಾರ್ವಜನಿಕರಿಗೆ ಅಪಾಯಕಾರಿಯಾಗಿದ್ದು, ಯಾವುದೇ ಸಂದರ್ಭದಲ್ಲಿ ಬೀಳುವ ಸ್ಥಿತಿಯಲ್ಲಿರುತ್ತವೆ. ಆದ್ದರಿಂದ ಸಂಬಂಧ ಪಟ್ಟ ಇಲಾಖೆಯವರು ಗಮನ ಹರಿಸಲು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ಕೂಡಲೇ ವಾರ್ಡ್ ಪ್ರದೇಶದಲ್ಲಿ ಪರಿಶೀಲಿಸಿ, ಒಣಗಿರುವ ಹಾಗೂ ಅಪಾಯದ ಅಂಚಿನಲ್ಲಿರುವ ಮರಗಳನ್ನು ತೆರವುಗೊಳಿಸಲು ಹಾಗೂ ಹಲವು ಮರಗಳನ್ನು ಟ್ರಿಮ್ ಮಾಡಲು ಅರಣ್ಯ ವಿಭಾಗಕ್ಕೆ ಮಾಹಿತಿ ನೀಡಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.

5) ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ರಾಮಯ್ಯ ಬಡಾವಣೆಯಲ್ಲಿ ಹಲವು ಪುಂಡ ಪೋಕಿರಿಗಳು ಗುಂಪು ಗುಂಪಾಗಿ ಸೇರುವುದು, ಅನೈತಿಕ ಚಟುವಟಿಕೆಗಳನ್ನು ನಡೆಸುವುದು ಮಾಡುತ್ತಿರುವುದಾಗಿ, ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಕಾನೂನು ಸುವ್ಯವಸ್ಥೆ ಅಧಿಕಾರಿಗಳಿಗೆ ದೈನಂದಿನ ಗಸ್ತನ್ನು ಹೆಚ್ಚಿಸಿ, ತೀವ್ರಗೊಳಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

6) ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು ರವರು ಮಾತನಾಡಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ ವ್ಯಾಪ್ತಿಯಲ್ಲಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಘನತ್ಯಾಜ್ಯ ನಿರ್ವಹಣೆ ವಿಭಾಗದ ಆಟೋ ಟಿಪ್ಪರ್‌ಗಳು ವಾರ್ಡ್‌ನಲ್ಲಿ 2011ನೇ ಸಾಲಿನಲ್ಲಿ ಸರ್ವೆಯ ನಿಯಮಾವಳಿಯಂತೆ 25 ಬ್ಲಾಕ್‌ಗಳಾಗಿ ವಿಂಗಡಿಸಿದ್ದು, ಅದರಂತೆ ಮನೆ ಮನೆಗಳಿಂದ ಕಸ ಸಂಗ್ರಹಿಸಲು 25 ಆಟೋ ಟಿಪ್ಪರ್ ಅಳವಡಿಸಲಾಗಿರುತ್ತದೆ. ಆದರೆ 2020-21 ಸಾಲಿನಲ್ಲಿ ಮಾರುಕಟ್ಟೆ, ವಾಣಿಜ್ಯ, ಜನಸಂಖ್ಯೆ ಹೆಚ್ಚಳವಾಗಿರುವ ಹಿನ್ನಲೆಯಲ್ಲಿ ಸರ್ವೆ ಮಾಡಿ, 28 ಬ್ಲಾಕ್‌ಗಳಾಗಿ ಹೆಚ್ಚುವರಿ ಮಾಡಲು ವಾರ್ಡ್



Scanned with CamScanner

ಕಮಿಟಿ ಸಭೆಯಲ್ಲಿ ಪ್ರಸ್ತಾಪಿಸಲಾಗಿ, ಸಾರ್ವಜನಿಕರ ಹಿತದೃಷ್ಟಿಯಿಂದ 28 ಬ್ಲಾಕ್‌ಗಳನ್ನು ಹೆಚ್ಚುವರಿ ಮಾಡಲು ಹಾಗೂ ಸದರಿ ಬ್ಲಾಕ್‌ಗಳಿಗೆ ಅವಶ್ಯಕ ವಿರುವ ಆಟೋ ಟಿಪ್ಪರ್‌ಗಳನ್ನು ನಿಯೋಜಿಸಲು ಕೋರಿ, ಸಕ್ಷಮ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಲಾಯಿತು.

7) <u>ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ,</u> ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ವಾರ್ಡ್ ಕಛೇರಿಯ ಆಸ್ಪತ್ರೆಯಲ್ಲಿ ಕೋವಿಡ್-19 ಪರೀಕ್ಷೆಗಳನ್ನು ಸತತವಾಗಿ ನಡೆಸುತ್ತಿದ್ದು, ಒಟ್ಟು 07 ಸಕ್ರಿಯ ಪ್ರಕರಣಗಳಲ್ಲಿ 05 ಹೋಮ್ ಐಸೋಲೇಷನ್, 02 ಜನ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್‍ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಮಾಡಲಾಗುತ್ತಿರುತ್ತದೆ. ಪ್ರಸ್ತುತ 41351 ಸಾರ್ವಜನಿಕರಿಗೆ ಪರೀಕ್ಷೆ ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 31688 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

Prasanna Kumar. A

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

<u>ಪ್ರತಿಯನ್ನು</u>

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner